ಈ) ಈ ಮೇಲಿನ ಸ್ಥಳಗಳಲ್ಲಿ ನಿವೇಶನ, ಸ್ಥಳಾವಕಾಶ ಹಾಗೂ ಸಾಕಷ್ಟು ವಿದ್ಯಾರ್ಥಿಗಳ ಸಂಖ್ಯೆ ಇದ್ದರೂ ಸಹ ಪ್ರೌಢ ಶಾಲೆಗಳನ್ನು ಆರಂಭಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ತಕ್ಷಣವೇ ಈ ಗ್ರಾಮಗಳಲ್ಲಿ ಪ್ರೌಢಶಾಲೆಗಳನ್ನು ಆರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಬಂದಿದೆ.

ಆ) ಸಧ್ಯ ಅನುದಾನದ ಲಭ್ಯತೆ ಕೊರತೆ.

ಇ) ಪರಿಶೀಲನಾ ಹಂತದಲ್ಲಿದೆ.

ಈ) ಬಂದಿದೆ.

ಉ) ಹೊಸದಾಗಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಸಹಮತಿಗಾಗಿ ಕಳುಹಿಸಲಾಗಿದ್ದು, ಸಹಮತಿ ದೊರೆತ ನಂತರ ಅಗತ್ಯತೆಯ ಆಧಾರ ಮೇರೆಗೆ ಹೊಸ ಪ್ರೌಢ ಶಾಲೆಗಳನ್ನು ಮಂಜೂರು ಮಾಡಲು ಕ್ರಮ ವಹಿಸಲಾಗುವುದು.

ಶಿಕ್ಷಕರ ಕೊರತೆ

1438(1725), ಡಾ॥ ಮಾಲಕ ರೆಡ್ಡಿ ಎ.ಬಿ. (ಯಾದಗಿರಿ)

ಅ) ಯಾದಗಿರಿ ವಿಧಾನ ಸಭೆ ಕ್ಷೇತ್ರದಲ್ಲಿ ಶಿಕ್ಷಕರ ಕೊರತೆಯಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ಈವರೆವಿಗೂ ಕ್ರಮ ಕೈಗೊಳ್ಳದೇ ಇರಲು ಕಾರಣಗಳೇನು;

ಇ) ಯಾದಗಿರಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ವಿಭಾಗದಲ್ಲಿ ಮಂಜೂರಾದ ಶಿಕ್ಷಕ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು; (ಶಾಲಾವಾರು ವಿವರ ಒದಗಿಸುವುದು)

ಈ) ಶಿಕ್ಷಕರ ಕೊರತೆ ನೀಗಿಸಿ ಪಾಠ ಪ್ರವಚನಗಳು ಸಮರ್ಪಕವಾಗಿ ನಡೆಯಲು ಸರ್ಕಾರದ ವತಿಯಿಂದ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ?

ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಬಂದಿದೆ.

ಆ) ಅನ್ವಯಿಸುವುದಿಲ್ಲ.

ಇ) ಪ್ರಾಥಮಿಕ ಶಾಲೆಗಳಿಗೆ ಮಂಜೂರಾಗಿರುವ ಶಿಕ್ಷಕರ ಹುದ್ದೆಗಳು: 4,543.
ಪ್ರೌಢ ಶಾಲೆಗಳಿಗೆ ಮಂಜೂರಾಗಿರುವ ಶಿಕ್ಷಕರ ಹುದ್ದೆಗಳು: 1,280.
ಪ್ರಾಥಮಿಕ ಶಾಲೆಗಳಲ್ಲಿ ಶಿಕ್ಷಕರ ಖಾಲಿ ಇರುವ ಹುದ್ದೆಗಳು: 999.
ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಖಾಲಿ ಇರುವ ಹುದ್ದೆಗಳು: 153.

ಈ) ಶಿಕ್ಷಕರ ಕೊರತೆ ನೀಗಿಸುವುದಕ್ಕಾಗಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಖಾಯಂ ಆಗಿ ಭರ್ತಿ ಮಾಡಲು ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು (TET) ನಡೆಸಲಾಗಿದೆ. ಆದಾಗ್ಯೂ, ಶೈಕ್ಷಣಿಕ ಕಾರ್ಯಕ್ರಮಗಳಿಗೆ ಅಡಚಣೆ ಆಗಬಾರದೆನ್ನುವ ದೃಷ್ಟಿಯಿಂದ ನೇಮಕಾತಿ ಮಾಡುವವರೆಗೆ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಮತ್ತು ಸರ್ಕಾರಿ ಪ್ರೌಢ ಶಾಲೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಸರ್ಕಾರದ ಆದೇಶ ಸಂಖ್ಯೆ: ಇಡಿ194 ಎಸ್‌ಟಿಬಿ 2013; ದಿನಾಂಕ:13.06.2014ರಲ್ಲಿ ಅನುಮತಿ ನೀಡಲಾಗಿರುತ್ತದೆ ಹಾಗೂ ಜೂನ್–2014ರ ನಂತರ ನಿವೃತ್ತರಾಗಲಿರುವ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರನ್ನು ಖಾಲಿ ಹುದ್ದೆಗಳನ್ನು ಭರ್ತಿ

ಮಾಡುವವರೆಗೆ ಸೇವೆಯಲ್ಲಿ ಮುಂದುವರೆಸಲು ಆದೇಶ ಹೊರಡಿಸಿದೆ.

ಕನ್ನಡ ಭಾಷಾ ವಿನಾಯಿತಿ ಹಾಗೂ ಸಂಸ್ಕೃತ ವಿದ್ಯಾರ್ಥಿ ವೇತನ

1440(2354), ಡಾ॥ ಅಶ್ವಥ್‌ನಾರಾಯಣ ಸಿ.ಎನ್. (ಮಲ್ಲೇಶ್ವರಂ)

ಅ) ರಾಜ್ಯದಲ್ಲಿ ಎಲ್ಲಾ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ತ್ರಿಭಾಷಾ ಸೂತ್ರ ಜಾರಿಯಲ್ಲಿದೆಯೇ;

ಆ) ಕನ್ನಡವನ್ನು ಪ್ರಥಮ ಭಾಷೆಯಾಗಿ ಡಿ.ಎಡ್ ಮತ್ತು ಬಿ.ಎಡ್ ಮಾಡಿದ ವಿದ್ಯಾರ್ಥಿಗಳಿಗೆ ಉದ್ಯೋಗಗಳನ್ನು ಕಲ್ಪಿಸಲಾಗುತ್ತಿದ್ದು, ಕನ್ನಡವನ್ನು ತೃತೀಯ ಭಾಷೆಯಾಗಿ ಓದಿದ ವಿದ್ಯಾರ್ಥಿಗಳಿಗೂ ಈ ವ್ಯವಸ್ಥೆಯನ್ನು ವಿಸ್ತರಿಸದೇ ಇರಲು ಕಾರಣಗಳೇನು;

ಇ) ಪ್ರೌಢ ಶಾಲೆಗಳಲ್ಲಿ ಸಂಸ್ಕೃತವನ್ನು ವ್ಯಾಸಂಗ ಮಾಡುವ ಸಂಸ್ಕೃತ ವಿದ್ಯಾರ್ಥಿಗಳಿಗೆ ಸರ್ಕಾರ ಪ್ರತಿ ವರ್ಷ ತಲಾ 300 ರೂ.ಗಳ ವಿದ್ಯಾರ್ಥಿ ವೇತನ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಈ ಸಂಬಂಧ ವಿದ್ಯಾರ್ಥಿ ವೇತನ ವಿತರಿಸಲು ಶಿಕ್ಷಣ ಇಲಾಖೆಯ ₹ 90.00 ಲಕ್ಷಗಳ ಬೇಡಿಕೆ ಸಲ್ಲಿಸಿದ್ದು ಇದುವರೆವಿಗೂ ಅನುದಾನ ಬಿಡುಗಡೆ ಮಾಡದಿರಲು ಕಾರಣವೇನು;

ಉ) ಹಾಗಿದ್ದಲ್ಲಿ, ಈ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು?

ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಹೌದು.